ಸದನದಲ್ಲಿ ಉತ್ತರಿಸುವ
ಪ್ರಶ್ನೆಗಳ ಪಟ್ಟಿ
ಒಟ್ಟು ಪ್ರಶ್ನೆಗಳು – ೧೫

ಪಟ್ಟಿ–೦೪

# ಕರ್ನಾಟಕ ವಿಧಾನ ಪರಿಷತ್ತು

**ನೂರ ಇಪ್ಪತ್ತಾರನೆಯ ಅಧಿವೇಶನ**

**ಶುಕ್ರವಾರ, ದಿನಾಂಕ: ೧೨ನೇ ಡಿಸೆಂಬರ್, ೨೦೧೪**

**ಸಮೂಹ – V**

೧. ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು

೨. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

೩. ವಸತಿ ಸಚಿವರು

೪. ಅಬಕಾರಿ ಸಚಿವರು

೫. ಮೂಲ ಸೌಲಭ್ಯ ಅಭಿವೃದ್ಧಿ, ವಾರ್ತಾ ಹಾಗೂ ಹಜ್ ಸಚಿವರು

೬. ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು

೭. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಲಬೀಲಿರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು

## ಶಿಕ್ಷಕರುಗಳ ಅಂತರ್‌ಘಟಕ ವರ್ಗಾವಣೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) –**

೪೬ (೬೩೭) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೦೧ರ ನಂತರ ನೇಮಕವಾದ ಇಂಗ್ಲಿಷ್, ವಿಜ್ಞಾನ, ಹಿಂದಿ ವಿಷಯಗಳ ಪ್ರಾಥಮಿಕ ಶಾಲಾ ಶಿಕ್ಷಕರುಗಳು ನೇಮಕವಾಗಿ ೧೪ ವರ್ಷ ಕಳೆದಿದ್ದರೂ ಕೇವಲ ಒಂದು ಬಾರಿ ಮಾತ್ರ ಅಂತರ್ ಘಟಕ ವರ್ಗಾವಣೆಗೆ ಒಳಗಾಗಿರುವುದು ನಿಜವೇ ; ಅಂತರ್ ಘಟಕ ವರ್ಗಾವಣೆ ಕುರಿತು ವಿವರ ನೀಡುವುದು ;

(ಆ) ಕಳೆದ ಹತ್ತು ವರ್ಷಗಳಿಂದ ನೇಮಕಾತಿಯಾದಾಗಿನಿಂದಲೂ ವರ್ಗಾವಣೆಯಾಗದ ಮೇಲ್ಕಾಣಿಸಿದ ವಿಷಯಗಳ ಪ್ರಾಥಮಿಕ ಶಾಲಾ ಶಿಕ್ಷಕರ ಅಂದಾಜು ಸಂಖ್ಯೆ ಎಷ್ಟು ;

(ಇ) ಇವರುಗಳಿಗೆ ಮತ್ತೊಂದು ಬಾರಿ ಅಂತರ್‌ಘಟಕ ವರ್ಗಾವಣೆಗೆ ಅವಕಾಶ ಕೊಡುವುದರಿಂದ ಆಗಬಹುದಾದ ಅನಾನುಕೂಲತೆಗಳೇನು ;

(ಈ) ಈ ಸಂಬಂಧ ಸರ್ಕಾರ ಈ ರೀತಿಯ ಅಂತರ್‌ಘಟಕ ವರ್ಗಾವಣೆಗೆ ಅವಕಾಶ ನೀಡುವುದೇ ; ಇಲ್ಲವಾದಲ್ಲಿ ಪ್ರಮುಖ ಕಾರಣವೇನು ?

## ಅನುಮತಿ ರಹಿತ ನಿಯಮ ಉಲ್ಲಂಘನೆಯ ಶಿಕ್ಷಣ ಸಂಸ್ಥೆಗಳು

**ಶ್ರೀ ಎಂ. ಶ್ರೀನಿವಾಸ (ವಿಧಾನಸಭೆಯಿಂದ ಚುನಾಯಿತರಾದವರು) –**

೪೭ (೧೬೦) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರದಲ್ಲಿರುವ ಸರ್ಕಾರಿ, ಅನುದಾನಿತ ಮತ್ತು ಖಾಸಗಿ ಶಾಲೆಗಳ ಸಂಖ್ಯೆ ಎಷ್ಟು ; (ವಲಯವಾರು ಪ್ರತ್ಯೇಕ ಮಾಹಿತಿಯನ್ನು ಒದಗಿಸುವುದು)

(ಆ) ಹಲವಾರು ಖಾಸಗಿ ಶಿಕ್ಷಣ ಸಂಸ್ಥೆಗಳು ಅನುಮತಿರಹಿವಾಗಿ ಶಾಲೆಗಳನ್ನು/ ಸಂಸ್ಥೆಗಳನ್ನು ನಡೆಸುತ್ತಿರುವ ಮತ್ತು ಶಿಕ್ಷಣ ಮಾಧ್ಯಮದಲ್ಲೂ ನಿಯಮಗಳನ್ನು ಉಲ್ಲಂಘಿಸುತ್ತಿರುವ ಪ್ರಕರಣಗಳನ್ನು ಸರ್ಕಾರವು ಗಂಭೀರವಾಗಿ ಪರಿಗಣಿಸಿದೆಯೇ, ಹಾಗಿದ್ದಲ್ಲಿ, ಕಳೆದ ಐದು ವರ್ಷಗಳಲ್ಲಿ ಇಂತಹ ಎಷ್ಟು ಪ್ರಕರಣಗಳನ್ನು ಪತ್ತೆ ಹಚ್ಚಿ ಯಾರ ವಿರುದ್ಧ ಕ್ರಮ ಕೈಗೊಳ್ಳಲಾಗಿದೆ ? (ಪ್ರತ್ಯೇಕ ಮಾಹಿತಿ ಒದಗಿಸುವುದು)

## ಶುದ್ಧ ಕುಡಿಯುವ ನೀರಿನ ಘಟಕಗಳು

**ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೪೮ (೬೮೮) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಪ್ಪಳ ಜಿಲ್ಲೆಯಲ್ಲಿ ಜಿಲ್ಲಾ ಪಂಚಾಯತ್ ವತಿಯಿಂದ ನಿರ್ಮಿಸಲಾದ ಶುದ್ಧ ಕುಡಿಯುವ ನೀರಿನ ಘಟಕಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಪ್ರತಿ ಘಟಕಕ್ಕೆ ಒದಗಿಸಲಾದ ಅನುದಾನ ಎಷ್ಟು ; ಸಾಮರ್ಥ್ಯ, ಅಳವಡಿಸಲಾದ ಸಲಕರಣೆಗಳ ಮಾಹಿತಿಯನ್ನು ನೀಡುವುದು ;

(ಇ) ನಿರ್ಮಾಣಗೊಂಡು ಲೋಕಾರ್ಪಣೆಗೊಳ್ಳದ ಘಟಕಗಳು ಇವೆಯೇ ; ಇದ್ದಲ್ಲಿ, ವಿವರಗಳನ್ನು ನೀಡುವುದು ; ಲೋಕಾರ್ಪಣೆಗೊಳಿಸಲು ಆಗುತ್ತಿರುವ ವಿಳಂಬಕ್ಕೆ ಕಾರಣಗಳೇನು ;

(ಈ) ಲೋಕಾರ್ಪಣೆಗೊಂಡು ಅಸಮರ್ಪಕ ನಿರ್ವಹಣೆಯಿಂದ ಸ್ಥಗಿತ ಗೊಂಡಿರುವಂತಹ ಶುದ್ಧ ಕುಡಿಯುವ ನೀರಿನ ಘಟಕಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಉ) ತಾಂತ್ರಿಕವಾಗಿ, ಒಂದು ಘಟಕ ಸ್ಥಾಪನೆಯಾದ ಮೇಲೆ ಹಲವಾರು ತಿಂಗಳು ಅದನ್ನು ಉಪಯೋಗಿಸದೇ ಇದ್ದರೆ ಅದರಲ್ಲಿನ ಉಪಕರಣಗಳು ಹಾಳಾಗುವ ಸಾಧ್ಯತೆ ಇದೆಯೇ, ಇಲ್ಲವೇ ;

(ಊ) ಉಪಕರಣಗಳು ಹಾಳಾಗಿ, ಘಟಕವನ್ನು ಪುನಃ ನವೀಕರಿಸಿದ ಪ್ರಕರಣಗಳು ಕಂಡು ಬಂದಿವೆಯೇ ? (ವಿವರ ನೀಡುವುದು)

## ಶಾಲೆಯಿಂದ ಹೊರಗುಳಿದ ಮಕ್ಕಳು

**ಶ್ರೀ ಅಲ್ಲಮ ಪ್ರಭುಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೪೯ (೭೨೦) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗುಲ್ಬರ್ಗಾ ಮತ್ತು ಯಾದಗಿರಿ ಜಿಲ್ಲೆಗಳ ಎಷ್ಟು ಮಕ್ಕಳು ಶಾಲೆಯಿಂದ ಹೊರಗುಳಿದಿದ್ದಾರೆ ; ಇದಕ್ಕೆ ಕಾರಣಗಳೇನು ;

(ಆ) ಈ ಜಿಲ್ಲೆಗಳಲ್ಲಿ ಹೊರಗುಳಿದ ಮಕ್ಕಳನ್ನು ಪುನಃ ಶಾಲೆಗಳಿಗೆ ಸೇರಿಸುವ ಬಗ್ಗೆ ಸರ್ಕಾರ ಏನಾದರೂ ಕ್ರಮ ಕೈಗೊಂಡಿದೆಯೇ ?

## ಕುಡಿಯುವ ನೀರು ಬಳಕೆಗೆ ಮೀಟರ್ ಅಳವಡಿಕೆ

**ಶ್ರೀ ಮೃತ್ಯುಂಜಯ ಜಿನಗಾ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೫೦ (೬೦೧) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಗ್ರಾಮ ಪಂಚಾಯತ್‌ಗಳ ವ್ಯಾಪ್ತಿಯಲ್ಲಿ ಕೊಳಾಯಿ (ನಲ್ಲಿ) ಮೂಲಕ ಒದಗಿಸುವ ಕುಡಿಯುವ ನೀರಿಗೆ ತೆರಿಗೆ ವಿಧಿಸಲಾಗುತ್ತಿದೆಯೇ ;

(ಆ) ಹಾಗಿದ್ದರೆ, ಶೇಕಡಾ ಎಷ್ಟನ್ನು ಯಾವ ಆಧಾರದಲ್ಲಿ ವಿಧಿಸಲಾಗುತ್ತಿದೆ ;

(ಇ) ಈ ಕುಡಿಯುವ ನೀರಿನ ನಲ್ಲಿಗಳಿಗೆ ಮೀಟರ್ ಅಳವಡಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ?

## ಕರ್ನಾಟಕ ರಾಜ್ಯ ಸುವರ್ಣ ಸಂಭ್ರಮ ಯೋಜನೆ

**ಶ್ರೀ ಅಶ್ವತ್ ನಾರಾಯಣ (ವಿಧಾನಸಭೆಯಿಂದ ಚುನಾಯಿತರಾದವರು) –**

೫೧ (೭೦೯) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯದ ೫೦ನೇ ವರ್ಷದ ಸುವರ್ಣ ಸಂಭ್ರಮ ಯೋಜನೆಯಡಿಯಲ್ಲಿ ಸಂಸ್ಕೃತಿ ಭವನ ನಿರ್ಮಾಣಕ್ಕಾಗಿ ಬಿಡುಗಡೆ ಮಾಡಿದ ಹಣವೆಷ್ಟು, ಯಾವಾಗ ಬಿಡುಗಡೆ ಮಾಡಲಾಯಿತು ;

(ಆ) ಯಾವ ಯಾವ ಜಿಲ್ಲೆಗೆ ಸಾಂಸ್ಕೃತಿಕ ಭವನ ನಿರ್ಮಾಣ ಮಾಡಲು ತೀರ್ಮಾನಿಸಿದೆ ; ಎಷ್ಟು ಕಡೆ ಭವನ ನಿರ್ಮಾಣ ಮಾಡಲಾಗಿದೆ ;

(ಇ) ಭವನ ನಿರ್ಮಾಣ ಮಾಡಲು ಸಾಧ್ಯವಾಗದಿರುವ ಜಿಲ್ಲೆಗಳು ಯಾವುವು ; ಕಾರಣವೇನು ?

## ತಾಲ್ಲೂಕು ಪಂಚಾಯತಿ ವ್ಯಾಪ್ತಿಯ ವಸತಿ ಗೃಹಗಳ ದುರಸ್ತಿ

**ಶ್ರೀ ಬಿ. ರಾಮಕೃಷ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೫೨ (೫೮೯) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಡ್ಯ ನಗರದಲ್ಲಿ ತಾಲ್ಲೂಕು ಪಂಚಾಯ್ತಿ ವ್ಯಾಪ್ತಿಯಲ್ಲಿರುವ ವಸತಿ ಗೃಹಗಳ ಸಂಖ್ಯೆ ಎಷ್ಟು ; ಅವುಗಳು ಯಾವುವು ;

(ಆ) ಈ ವಸತಿ ಗೃಹಗಳು ಶಿಥಿಲಗೊಂಡು ವಾಸಕ್ಕೆ ಯೋಗ್ಯವಾಗಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಈ ವಸತಿ ಗೃಹಗಳಲ್ಲಿ ವಾಸಿಸುತ್ತಿರುವ ನೌಕರರು ಪ್ರಾಣಭೀತಿಯಿಂದ ವಾಸಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಹಾಗಿದ್ದಲ್ಲಿ, ಈ ವಸತಿ ಗೃಹಗಳನ್ನು ದುರಸ್ತಿಪಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಉ) ಈ ವಸತಿ ಗೃಹಗಳನ್ನು ದುರಸ್ತಿಪಡಿಸಲು ಸರ್ಕಾರ ಕೂಡಲೇ ಅನುದಾನವನ್ನು ಬಿಡುಗಡೆ ಮಾಡುವುದೇ ; ಹಾಗಿದ್ದಲ್ಲಿ, ಎಷ್ಟು ಪ್ರಮಾಣದ ಅನುದಾನವನ್ನು ಬಿಡುಗಡೆ ಮಾಡುವುದು ?

## ಕುಡಿಯಲು ಯೋಗ್ಯವಲ್ಲದ ಬೋರ್‌ವೆಲ್‌ಗಳ ನೀರು

**ಶ್ರೀ ಕೆ. ಗೋವಿಂದರಾಜ್ (ವಿಧಾನಸಭೆಯಿಂದ ಚುನಾಯಿತರಾದವರು) –**

೫೩ (೧೭೨) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ವಿವಿಧ ಕಾರಣಗಳಿಂದಾಗಿ ಅಂತರ್ಜಲ ಮಟ್ಟ ಕುಸಿಯುತ್ತಿರುವ ಹಾಗೂ ಕೊರೆಯಲಾದ ಬೋರ್‌ವೆಲ್‌ಗಳಿಂದ ಸಿಗುತ್ತಿರುವ ನೀರು ಕುಡಿಯಲು ಯೋಗ್ಯವಾಗಿಲ್ಲ ಎಂಬ ಅಂಶವನ್ನು ಸರ್ಕಾರವು ಗಂಭೀರವಾಗಿ ಪರಿಗಣಿಸಿದೆಯೇ; ಹಾಗಿದ್ದಲ್ಲಿ, ಈ ನಿಟ್ಟಿನಲ್ಲಿ ಕಂಡುಬಂದ ಅಂಶಗಳ ಕುರಿತಾಗಿ ಮಾಹಿತಿ ಒದಗಿಸುವುದು ;

(ಆ) ರಾಜ್ಯದ ಯಾವ ಯಾವ ಭಾಗಗಳಲ್ಲಿ ಇಂತಹ ಸಮಸ್ಯೆಯನ್ನು ಕಂಡುಕೊಳ್ಳಲಾಗಿದೆ, ಈ ಬೋರ್‌ವೆಲ್‌ಗಳಲ್ಲಿ ಸಿಗುತ್ತಿರುವ ನೀರಿನಲ್ಲಿ ಮಾರಕ ರೋಗಗಳಿಗೆ ಕಾರಣವಾಗುವ ಯಾವ ರೀತಿಯ ಅಂಶಗಳನ್ನು ಗುರುತಿಸಲಾಗಿದೆ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಇ) ಅಂತರ್ಜಲ ಕುಸಿತ ತಡೆಯುವ, ಶುದ್ಧ ಕುಡಿಯುವ ನೀರು ಒದಗಿಸುವ ನಿಟ್ಟಿನಲ್ಲಿ ರಾಜ್ಯ ಸರ್ಕಾರವು ಕೈಗೊಂಡ ಕ್ರಮಗಳು ಏನು ; ಈ ನಿಟ್ಟಿನಲ್ಲಿ ಕೇಂದ್ರ ಸರ್ಕಾರದ ಸಹಕಾರ ದೊರಕುತ್ತಿದೆಯೇ ? (ಪೂರ್ಣ ವಿವರಗಳನ್ನು ಒದಗಿಸುವುದು)

## ವಿಶ್ವವಿದ್ಯಾಲಯ ವ್ಯಾಪ್ತಿಯ ಕಾಲೇಜುಗಳಲ್ಲಿ ಶಿಕ್ಷಣ ಶುಲ್ಕ

**ಶ್ರೀ ವಿ. ಸೋಮಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) –**

೫೪ (೫೮೨) ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಿಶ್ವವಿದ್ಯಾಲಯಗಳು ತನ್ನ ಕಾಲೇಜುಗಳ ವ್ಯಾಪ್ತಿಯ ಶಿಕ್ಷಣ ಶುಲ್ಕ ನಿಗದಿಗೆ ಅಧಿಕಾರ ಹೊಂದಿವೆಯೇ ; ಇದಕ್ಕೆ ಸರ್ಕಾರದ ಪೂರ್ವಾನುಮತಿ ಅಗತ್ಯವಿದೆಯೇ; (ವಿವರ ಒದಗಿಸುವುದು)

(ಆ) ಸಾಮಾನ್ಯ ಹಾಗೂ ವೃತ್ತಿ ಶಿಕ್ಷಣ ಸೇರಿದಂತೆ ಯಾವ ಯಾವ ಕೋರ್ಸ್‌ಗಳಿಗೆ ಎಷ್ಟು ಶುಲ್ಕ ನಿಗದಿಪಡಿಸಿದೆ ; ಇದನ್ನು ಈಗ ಏಕಾಏಕಿ ಹೆಚ್ಚಿಸಲು ವಿಶ್ವವಿದ್ಯಾಲಯಗಳು ನಿರ್ಧರಿಸಿವೆಯೇ ; ಇದಕ್ಕೆ ಕಾರಣಗಳೇನು ;

(ಇ) ಸದರಿ ಪ್ರಸ್ತಾವನೆ ಯಾವಾಗಿನಿಂದ ಜಾರಿಗೆ ಬಂದಿದೆ ; ಇದರಿಂದ ವಿದ್ಯಾರ್ಥಿಗಳಿಗೆ ಅನಾನುಕೂಲವಾಗುವುದೆಂದು ಸರ್ಕಾರ ಭಾವಿಸುವುದಿಲ್ಲವೇ;

(ಈ) ಈ ನಿಟ್ಟಿನಲ್ಲಿ ಪರಿಶಿಷ್ಟ ಹಾಗೂ ಹಿಂದುಳಿದ ವರ್ಗದ ಅಭ್ಯರ್ಥಿ–ವಿದ್ಯಾರ್ಥಿಗಳು ಪ್ರವೇಶ ಶುಲ್ಕ ಭರಿಸಲು ವಿನಾಯ್ತಿ ಪಡೆದಿಲ್ಲವೇ ; ಹಾಗಿದ್ದಲ್ಲಿ, ಪ್ರವೇಶ ಸಂದರ್ಭದಲ್ಲಿ ಶುಲ್ಕ ವಿನಾಯ್ತಿ ನೀಡಿ ಉಳಿದ ಶುಲ್ಕ ಪಡೆಯಲು ಇರುವ ತೊಂದರೆಗಳು ಏನು ;

(ಉ) ಪ್ರವೇಶ ಸಂದರ್ಭದಲ್ಲೇ ಶುಲ್ಕ ಪಾವತಿಸಿ, ನಂತರ ಶುಲ್ಕ ವಿನಾಯ್ತಿಯ ಮೊತ್ತವನ್ನು ಸಂಬಂಧಪಟ್ಟ ಇಲಾಖೆಗಳಿಂದ ಮರು ಸಂದಾಯ ಪಡೆಯುವಂತೆ ವಿದ್ಯಾರ್ಥಿಗಳನ್ನು ಒತ್ತಾಯಿಸುತ್ತಿರುವುದೇಕೆ ;

(ಊ) ವಿಶ್ವವಿದ್ಯಾಲಯ ವ್ಯಾಪ್ತಿಯ ಸರ್ಕಾರಿ ಕಾಲೇಜು ಸರ್ಕಾರದ ಆದೇಶವನ್ನು ಪಾಲಿಸದಿದ್ದಲ್ಲಿ, ಖಾಸಗಿ ಶಿಕ್ಷಣ ಸಂಸ್ಥೆಗಳ ಪಾಡೇನು ? (ವಿವರ ಒದಗಿಸುವುದು)

## ವಸತಿ ಹೀನರಿಗೆ ನಿವೇಶನ ಮತ್ತು ಮನೆ ವಿತರಣೆ

**ಶ್ರೀ ಗೋ. ಮಧುಸೂದನ್ (ಪದವೀಧರರ ಕ್ಷೇತ್ರ) –**

೫೫ (೬೨೩) ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಸತಿ ಇಲಾಖೆಯ ಯಾವ ಯಾವ ಯೋಜನೆಯ ಅಡಿಯಲ್ಲಿ, ನಗರ ಮತ್ತು ಗ್ರಾಮೀಣ ಭಾಗದ ವಸತಿ ಹೀನರಿಗೆ ನಿವೇಶನ ಮತ್ತು ಮನೆಗಳನ್ನು ಕಳೆದ ಮೂರು ವರ್ಷಗಳಲ್ಲಿ ವಿತರಿಸಲಾಗಿದೆ ; ವಿಧಾನ ಸಭಾ ಕ್ಷೇತ್ರವಾರು ವಿವರ ನೀಡುವುದು ; (ಲಭ್ಯವಿಲ್ಲದಿದ್ದಲ್ಲಿ ಮಾತ್ರವೇ ತಾಲ್ಲೂಕುವಾರು ಅಂಕಿ–ಅಂಶಗಳ ವಿವರ ನೀಡುವುದು)

(ಆ) ಈ ವಿವಿಧ ಯೋಜನೆಗಳಿಗೆ ಪ್ರಸಕ್ತ ಆರ್ಥಿಕ ವರ್ಷದಲ್ಲಿ ಬಿಡುಗಡೆ ಮಾಡಲಾಗಿರುವ ಯೋಜನಾವಾರು, ವಿಧಾನ ಸಭಾ ಕ್ಷೇತ್ರವಾರು ಮೊತ್ತದ ವಿವರವನ್ನು ನೀಡುವುದು ; (ಲಭ್ಯವಿಲ್ಲದಿದ್ದಲ್ಲಿ ಮಾತ್ರವೇ, ತಾಲ್ಲೂಕುವಾರು ಅಂಕಿ–ಅಂಶಗಳ ವಿವರ ನೀಡುವುದು)

(ಇ) ಈ ವಸತಿ ಯೋಜನೆಗಳಿಗೆ ಕಳೆದ ಮೂರು ವರ್ಷಗಳಿಂದ ಕೇಂದ್ರ ಸರ್ಕಾರದಿಂದ ಒದಗಿ ಬಂದಿರುವ ಸಹಾಯ ಅನುದಾನವೆಷ್ಟು ? (ವಿವರ ನೀಡುವುದು)

## ಹಿರಿಯ ನಾಗರಿಕರಿಗೆ ಗುರುತಿನ ಚೀಟಿ

**ಶ್ರೀ ರಘುನಾಥರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು)–**

೫೬ (೬೭೦) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ ಜಿಲ್ಲೆಯಲ್ಲಿ ಎಷ್ಟು ಹಿರಿಯ ನಾಗರಿಕರಿಗೆ ಗುರುತಿನ ಚೀಟಿ ವಿತರಿಸಲಾಗಿದೆ ;

(ಆ) ಈ ಜಿಲ್ಲೆಯ ಹಿರಿಯ ನಾಗರಿಕರು ಗುರುತಿನ ಚೀಟಿ ಪಡೆಯಲು ಸೂಕ್ತ ವ್ಯವಸ್ಥೆ ಇಲ್ಲದೇ ಇರುವುದರಿಂದ ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಹಾಗಿದ್ದಲ್ಲಿ, ಈ ಸಂಬಂಧ ತೆಗೆದುಕೊಳ್ಳಲಾಗಿರುವ ಕ್ರಮಗಳೇನು ?

## ಗ್ರಾಮಾಂತರ ವಸತಿ ರಹಿತರಿಗೆ ಮನೆಗಳ ಹಂಚಿಕೆ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) –**

೩೭ (೧೬೧) ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗ್ರಾಮ ಪಂಚಾಯಿತಿ ಮಟ್ಟದಲ್ಲಿ ವಸತಿ ರಹಿತರಿಗೆ ಮನೆ ಹಂಚಿಕೆಯಲ್ಲಿ ಅನ್ಯಾಯವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಬಲಹೀನ ಹಿಂದುಳಿದ ವರ್ಗಗಳಿಗೆ ಮನೆ ಹಂಚಿಕೆ ಮಾಡಲು ಸರ್ಕಾರ ಕಾರ್ಯಕ್ರಮ ರೂಪಿಸಿದೆಯೇ ;

(ಇ) ಈ ಯೋಜನೆ ನ್ಯಾಯಯುತವಾಗಿ ಕಾರ್ಯಗತಗೊಳಿಸಲು ರಾಜ್ಯದಲ್ಲಿ ವಸತಿ ರಹಿತರ ಪಟ್ಟಿಯನ್ನು ತಯಾರಿಸಲಾಗಿದೆಯೇ ; ಹಾಗಿದ್ದರೆ, ವಸತಿ ರಹಿತರ ಸಂಖ್ಯೆ ಎಷ್ಟು, ಇವರಿಗೆ ಎಷ್ಟು ವರ್ಷದಲ್ಲಿ ಮನೆ ಹಂಚಿಕೆ ಮಾಡಲಾಗುವುದು ?

## ಬಿಸಿಯೂಟ ಕಾರ್ಯಕ್ರಮದಲ್ಲಿ ಪೂರೈಸುತ್ತಿರುವ ಆಹಾರ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು)–**

೩೮ (೬೦೭) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಿಸಿಯೂಟ ಕಾರ್ಯಕ್ರಮದಲ್ಲಿ ಪೂರೈಸುತ್ತಿರುವ ಆಹಾರದ ಗುಣಮಟ್ಟ ಕಲುಷಿತ ಆಹಾರ, ಪೌಷ್ಠಿಕಾಂಶದ ಕೊರತೆ, ವಿಷಪೂರಿತ ಆಹಾರ ಮುಂತಾದ ಕಾರಣದಿಂದ ಎಷ್ಟು ಶಾಲೆಯಲ್ಲಿ ಎಷ್ಟು ಮಕ್ಕಳು ಅಸ್ವಸ್ಥರಾಗಿದ್ದಾರೆ ; (ಶಾಲಾವಾರು, ತಾಲ್ಲೂಕುವಾರು ವಿವರ ಒದಗಿಸುವುದು)

(ಆ) ಹಾವೇರಿ ಜಿಲ್ಲೆಯ ರಾಣೆಬೆನ್ನೂರು ತಾಲ್ಲೂಕಿನ ವೈಟಿ ಹೊನ್ನತ್ತಿ (ಯಲ್ಲಾಪುರ) ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ೧೫೦ಕ್ಕೂ ಹೆಚ್ಚು ಮಕ್ಕಳು ಅಸ್ವಸ್ಥರಾಗಿ ಆಸ್ಪತ್ರೆಗೆ ದಾಖಲಾಗಿದ್ದು, ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದರೆ, ಇಂಥಹ ಅನಾಹುತ ಅವಘಡ, ಅಚಾತುರ್ಯ ಸಂಭವಿಸದ ರೀತಿಯಲ್ಲಿ ಬಿಸಿಯೂಟದ ಕಾರ್ಯಕ್ರಮದ ವ್ಯವಸ್ಥೆಯನ್ನು ಪುನರ್ ಪರಿಶೀಲಿಸಿ ಮೇಲ್ದರ್ಜೆಗೇರಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ? (ಸಂಪೂರ್ಣ ವಿವರ ಒದಗಿಸುವುದು)

## ಶಾಲೆಗಳಲ್ಲಿ ಶೌಚಾಲಯಗಳ ಕೊರತೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೫೯ (೬೩೧) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಸರ್ಕಾರಿ ಮತ್ತು ಖಾಸಗಿ ಶಾಲೆಗಳಲ್ಲಿ ವಿದ್ಯಾರ್ಥಿಗಳ ಸಂಖ್ಯೆಗೆ ಅನುಗುಣವಾಗಿ ಶೌಚಾಲಯಗಳಿಲ್ಲದೇ ಇರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ; ವಿಶೇಷವಾಗಿ ಬಾಲಕಿಯರಿಗೆ ಶೌಚಾಲಯಗಳಿಲ್ಲದೇ ಇರುವ ವಿಚಾರ ನಿಜವೇ ;

(ಆ) ಹಾಗಿದ್ದಲ್ಲಿ, ಅಂತಹ ಶಾಲೆಗಳಲ್ಲಿ ಶೌಚಾಲಯ ನಿರ್ಮಿಸುವ ವಿಚಾರ ಸರ್ಕಾರದ ಮುಂದೆ ಇದೆಯೇ ; ಎಷ್ಟು ಕಾಲಮಿತಿಯಲ್ಲಿ ಶೌಚಾಲಯ ನಿರ್ಮಿಸಲಾಗುವುದು; (ವಿವರಣೆ ನೀಡುವುದು)

(ಇ) ಇದುವರೆಗೆ ಶೌಚಾಲಯ ಇಲ್ಲದೆ ಇರುವ ಸರ್ಕಾರಿ ಮತ್ತು ಖಾಸಗಿ ಶಾಲೆಗಳು ಎಷ್ಟು ;

(ಈ) ಸರ್ಕಾರಿ ಶಾಲೆಗಳಲ್ಲಿ ಶೌಚಾಲಯಗಳನ್ನು ನಿರ್ಮಿಸಲು ಸರ್ಕಾರ ಒದಗಿಸುವ ಅನುದಾನವೆಷ್ಟು ; ಖಾಸಗಿ ಶಾಲೆಗಳಲ್ಲಿ ಶೌಚಾಲಯ ನಿರ್ಮಿಸಲು ಏನು ಕ್ರಮ ಕೈಗೊಳ್ಳಲಾಗಿದೆ ?

## ಮಕ್ಕಳ ಪೌಷ್ಠಿಕ ಆಹಾರದ ಕೊರತೆ

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) –**

೬೦ (೧೬೮) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರ ಮಕ್ಕಳ ಅಭಿವೃದ್ಧಿಗಾಗಿ ಯಾವ ಯಾವ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದೆ ;

(ಆ) ರಾಜ್ಯದಲ್ಲಿ ಇದುವರೆವಿಗೂ ಪೌಷ್ಟಿಕ ಆಹಾರದ ಕೊರತೆಯಿಂದ ಜೀವ ಕಳೆದುಕೊಂಡಿರುವ ಹಾಗೂ ನರಳುತ್ತಿರುವ ಮಕ್ಕಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಇ) ಈ ಬಗ್ಗೆ ಇಲಾಖೆ ತೆಗೆದುಕೊಂಡಿರುವ ಮುಂಜಾಗ್ರತಾ ಕ್ರಮಗಳೇನು ?

**ವಿ. ಶ್ರೀಶ್**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಮುದ್ರಣಾಲಯ, ಬೆಂಗಳೂರು, ಪಿ7, ಕಾ.ಸೂ. 279, ಪ್ರತಿಗಳು 1500